## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ನಂಜನಗೂಡು ತಾಲ್ಲೂಕಿನ ಹೊರಳವಾಡಿ-ಹೊಸೂರು ಗ್ರಾಮದ ಕುಡಿಯುವ ನೀರು ಯೋಜನೆಯ ಕಾಮಗಾರಿಯಲ್ಲಿ ಕರ್ತವ್ಯಲೋಪವೆಸಗಿರುವ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರ ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12)3)ರ ವರದಿ – ವಿವರವಾದ ಇಲಾಖಾ ವಿಚಾರಣೆಗಾಗಿ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ- ಆದೇಶ

ಓದಲಾಗಿದೆ :-1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರ ಅ.ಸ.ಪತ್ರ ಸಂಖ್ಯೆ : Compt / Uplok / MYS/3817/ 2015/ DRE-4, ದಿನಾಂಕ. 29.09.2018

2. ಮಾನ್ಯ ಉಪಲೋಕಾಯುಕ್ತರವರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ12(3)ರ ವರದಿ ಸಂಖ್ಯೆ : Compt / Uplok / MYS/ 3817/2015 / DRE-, ದಿನಾಂಕ. 29.08.2018

****

ಪ್ರಸ್ತಾವನೆ :

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ : 29.09.2018ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಮಾನ್ಯ ಉಪಲೋಕಾಯುಕ್ತರವರ ದಿನಾಂಕ : 29.08.2018ರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಸದರಿ ವರದಿಗೆ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಶ್ರೀ ಹೆಚ್.ಎಂ.ಮಲ್ಲೆಗೌಡ ಬಿನ್ ಮಹದೇವು, ಹೊರಳವಾಡಿ-ಹೊಸೂರು ಗ್ರಾಮ, ಕಸಬಾ ಹೋಬಳಿ, ನಂಜನಗೂಡು ಇವರು ಲೋಕಾಯುಕ್ತ ಸಂಸ್ಥೆಗೆ ಸಲ್ಲಿಸಿದ ದೂರಿನಲ್ಲಿ 2013-14ನೇ ಸಾಲಿನ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ ಹೊರಳವಾಡಿ-ಹೊಸೂರು ಗ್ರಾಮಕ್ಕೆ ಮಂಜೂರಾದ ಕುಡಿಯುವ ನೀರು ಯೋಜನೆಯನ್ನು ಬಸವೇಶ್ವರ ಗ್ರಾಮಕ್ಕೆ ಅಕ್ರಮವಾಗಿ ಪೂರೈಕೆ ಮಾಡಿರುವ ಶ್ರೀ ಶ್ರೀಧರ ಚೂರಿ, ಅಂದಿನ ಸಹಾಯಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ನಂಜನಗೂಡು ಇವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸದರಿ ದೂರಿನ ಬಗ್ಗೆ ಎದುರುದಾರರಾದ ಶ್ರೀ ಶ್ರೀಧರ ಜೂರಿ, ಸಹಾಯಕ ಇಂಜಿನಿಯರ್ ಇವರಿಗೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ತಿಳಿಸಿದ್ದು, ಅದರಂತೆ ಸದರಿಯವರು ಸಲ್ಲಿಸಿದ ಆಕ್ಷೇಪಣೆಯಲ್ಲಿ, ಸದರಿ ಕುಡಿಯುವ ನೀರಿನ ಯೋಜನೆಯನ್ನು ಅಂದಾಜು ಪಟ್ಟಿಯಂತೆ ಹೊರಳವಾಡಿ ಗ್ರಾಮದಲ್ಲಿ ಅನುಷ್ಠಾನಗೊಳಿಸಲಾಗಿದೆ ಎಂದು, ದೂರುದಾರರು ತಿಳಿಸಿರುವಂತೆ ಬಸವೇಶ್ವರ ಗ್ರಾಮದಲ್ಲಿ ಅನುಷ್ಠಾನಗೊಳಿಸಿಲ್ಲವೆಂದು ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರು ಶ್ರೀ ರಾಮಕೃಷ್ಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಉಪವಿಭಾಗ, ನಂಜನಗೂಡು, ಶ್ರೀ ಎಂ.ಕೆ.ಭಾಸ್ಕರ್, ಅಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಮೈಸೂರು ಹಾಗೂ ಶ್ರೀ ರಾಮಚಂದ್ರಪ್ಪ, ಅಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹೊರಳವಾಡಿ, ಗ್ರಾಮ ಪಂಚಾಯತ್ ರವರುಗಳನ್ನು ಕ್ರಮವಾಗಿ 2, 3, ಮತ್ತು 4ನೇ ಪ್ರತಿವಾದಿಗಳನ್ನಾಗಿ ಮಾಡಿ ಅವರುಗಳಿಂದ ಆಕ್ಷೇಪಣೆ ಪಡೆದಿದ್ದು. 2 ಮತ್ತು 3ನೇ ಪ್ರತಿವಾದಿಗಳು ಸಲ್ಲಿಸಿರುವ ಆಕ್ಷೇಪಣೆಯಲ್ಲಿ 2013–14ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ನಂಜನಗೂಡು ತಾಲ್ಲೂಕಿನ ಹೊರಳವಾಡಿ ಹೊಸೂರು ಗ್ರಾಮಕ್ಕೆ ಕುಡಿಯುವ ನೀರು ಸರಬುರಾಜು ಮಾಡಲು ರೂ.8.00ಲಕ್ಷ ಮೊತ್ತದ ಕ್ರಿಯಾ ಯೋಜನೆ ತಯಾರಿಸಿದ್ದು. ಅದರಂತೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದು. ದೂರುದಾರರು ತಿಳಿಸಿರುವಂತೆ ಬಸವೇಶ್ವರ ಗ್ರಾಮದಲ್ಲಿ ಕೈಗೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ. 4ನೇ ಎದುರುದಾರರು ಸಲ್ಲಿಸಿರುವ ವಿವರಣೆಯಲ್ಲಿ, 2013–14ನೇ ಸಾಲಿನಲ್ಲಿ ಹೊರಳವಾಡಿ ಹೊಸೂರು ಗ್ರಾಮಕ್ಕೆ ಕುಡಿಯುವ ನೀರಿನ ತೊಂದರೆ ಇದ್ದರಿಂದ ಸದರಿ ಗ್ರಾಮದಲ್ಲಿಯೇ ಅನುಷ್ಠಾನಗೊಳಿಸಲಾಗಿದೆ ಎಂದು, ಸದರಿ ಯೋಜನೆಯ ನೀರನ್ನು ಬಸವೇಶ್ವರ ಗ್ರಾಮಕ್ಕೆ ಪೂರೈಸಲಾಗಿದ್ದು. ಈ ಸಮಯದಲ್ಲಿ ದೂರುದಾರರು ಗ್ರಾಮ ಪಂಚಾಯತ್‌ಗೆ ಯಾವುದೇ ದೂರು ನೀಡದ ಕಾರಣ ಗ್ರಾಮ ಪಂಚಾಯತ್‌ನಿಂದ ಯಾವುದೇ ಆಕ್ಷೇಪಣೆ ಇಲ್ಲವೆಂದು ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರು ಕಡತ ಮತ್ತು ದಾಖಲೆಗಳನ್ನು ಪರಿಶೀಲಿಸಿದ್ದು. ದೂರುದಾರರು ತಿಳಿಸಿರುವಂತೆ ಸದರಿ ಯೋಜನೆಯಿಂದ ಬಸವೇಶ್ವರ ನಗರಕ್ಕೆ ಮಾತ್ರ ಸೌಲಭ್ಯವಾಗಿದೆಯೆಂಬ ಬಗ್ಗೆ ಯಾವುದೇ ಅಂಶಗಳು ಕಂಡು ಬಂದಿರುವುದಿಲ್ಲವೆಂದು, ಒಂದು ಯೋಜನೆಗೆ ಮಂಜೂರಾದ ಹಣವನ್ನು ಇನ್ನೊಂದು ಯೋಜನೆಗೆ ವರ್ಗಾಯಿಸಲು ಅಧಿಕಾರವಿಲ್ಲವೆಂದು, ಆಪಾದಿತರುಗಳು ಒಂದು ಗ್ರಾಮಕ್ಕೆ ಮಂಜೂರಾದ ಯೋಜನೆಯ ಅನುದಾನವನ್ನು ಮತ್ತೊಂದು ಗ್ರಾಮಕ್ಕೆ ವರ್ಗಾಯಿಸಲು ಕಾರ್ಯನುಷ್ಠಾನಗೊಳಿಸಿ ಕರ್ತವ್ಯಲೋಪವೆಸಗಿರುವುದು ಕಂಡುಬಂದಿರುತ್ತದೆಂದು ತಿಳಿಸಿ, 1 ರಿಂದ 4ನೇ ಎದುರುದಾರರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ನಿಷ್ಠೆ ಪ್ರದರ್ಶಿಸದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ(ನಡತೆ)ನಿಯಮಗಳು1966 ನಿಯಮ3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯಸ್ಥರಾಗಿರುತ್ತಾರೆಂದು ತಿಳಿಸಿ, 2ನೇ ಎದುರುದಾರರಾದ ಶ್ರೀ ರಾಮಕೃಷ್ಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ನಂಜನಗೂಡು ರವರು ಈಗಾಗಲೇ ವಯೋನಿವೃತ್ತಿ ಹೊಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರಡಿ ಇಲಾಖೆಗೆ ಅನುಮತಿ ನೀಡಿ , ಸದರಿಯವರ ವಿರುದ್ಧ

ವಿವರವಾದ ಇಲಾಖೆ ವಿಚಾರಣೆ ನಡೆಸಲು ಪ್ರಕರಣವನ್ನು, ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957 ನಿಯಮ 14(ಎ) ರನ್ವಯ ತಮಗೆ ವಹಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ, ಆಪಾದಿತ ಆಕ್ಷೇಪಣೆಗಳ ಮತ್ತು ಇತರೆ ದಾಖಲೆಗಳನ್ನು ಒಟ್ಟಾರೆಯಾಗಿ ದಾಖಲೆಗಳನ್ನು ಪರಿಶೀಲಿಸಲಾಗಿ, 1 ರಿಂದ 4ನೇ ಎದುರುದಾರರು 2013-14ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮ ಕುಡಿಯುವ ನೀರು ಸರಬುರಾಜು ಯೋಜನೆಯಡಿ ಹೊರಳವಾಡಿ-ಹೊಸೂರು ಗ್ರಾಮಕ್ಕೆ ಕುಡಿಯುವ ನೀರು ಪೂರೈಸಲು ರೂ.8 ಲಕ್ಷ ಮೊತ್ತದ ಕ್ರಿಯಾ ತಯಾರಿಸಿದ್ದು, ಸದರಿ ಕ್ರಿಯಾ ಯೋಜನೆಯಂತೆ ಹೊರಳವಾಡಿ-ಹೊಸೂರು ಗ್ರಾಮದಲ್ಲಿ ಕಾಮಗಾರಿ ನಿರ್ವಹಿಸಿ, ಉಳಿದ ಹಣವನ್ನು ಮೇಲಾಧಿಕಾರಿಗಳ ಅನುಮೋದನೆ ಇಲ್ಲದೆ ಬಸವೇಶ್ವರ ಗ್ರಾಮಕ್ಕೆ ಕುಡಿಯುವ ನೀರು ಪೂರೈಸಲು ಉಪಯೋಗಿಸಿಕೊಂಡು ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಸದರಿ ಅಧಿಕಾರಿ/ನೌಕರರು ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ನಿಯಮಗಳನ್ನ ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966ರ ನಿಯಮ3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯಸ್ತರಾಗಿರುತ್ತಾರೆ. ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 11 ಮತ್ತು 11(ಎ)ರಂತೆ ಹಾಗೂ 2ನೇ ಎದುರುದಾರಾದ ಶ್ರೀ ರಾಮಕೃಷ್ಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ನಂಜನಗೂಡು ರವರು ದಿನಾಂಕ:31.07.2015ರಂದು ನಿವೃತ್ತಿ ಹೊಂದಿದ್ದು, ಸದರಿಯವರು ನಿವೃತ್ತಿ ಹೊಂದಿ ನಾಲ್ಕು ವರ್ಷ ಗತಿಸದೇ ಇರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರಂತೆ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 92 ಇಎನ್‌ಕ್ಯೂ 2018ಬೆಂಗಳೂರು, ದಿನಾಂಕ: 16.11.2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 1) ಶ್ರೀ ಶ್ರೀಧರ ಚೂರಿ, ಅಂದಿನ ಸಹಾಯಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ನಂಜನಗೂಡು 3) ಶ್ರೀ ಎಂ.ಕೆ.ಭಾಸ್ಕರ್, ಅಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಮೈಸೂ 4) ಶ್ರೀ ರಾಮಚಂದ್ರಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹೊರಳಾಡಿ ಗ್ರಾಮ ಪಂಚಾಯತ್, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 11 ಮತ್ತು 11(ಎ)ರಂತೆ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957ರ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

2ನೇ ಆಪಾದಿತರಾದ ಶ್ರೀ ರಾಮಕೃಷ್ಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ನಂಜನಗೂಡು ರವರು ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 11 ಮತ್ತು 11(ಎ)ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರಡಿ

ಅನುಮತಿ ನೀಡಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಗಳು 1957ರ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 16/11/2018
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ :-1. ಮಹಾಲೇಖಪಾಲರು, (ಲೆಕ್ಕಪತ್ರ ಅ & ಇ) ಕರ್ನಾಟಕ, ಬೆಂಗಳೂರು

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಮೂಲ ದಾಖಲೆಗಳನ್ನು ಇದರೊಂದಿಗೆ ಲಗಿತ್ತಿಸಿದೆ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ / ಆರ್ಥಿಕ ಇಲಾಖೆ
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
6. ಸಂಬಂಧಪಟ್ಟ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ರವರ ಮುಖಾಂತರ

ಪ್ರತಿಯನ್ನು :-

7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ
8. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ
9. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸುವ ಸಲುವಾಗಿ
10. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

*****